# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1634** |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಸಾರಿಗೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 11-03-2022 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಮಾನ್ಯ ರಾಜ್ಯಪಾಲರ ಭಾಷಣದಲ್ಲಿ ಬೆಂಗಳೂರು ಮತ್ತು ಇತರ ಪ್ರಮುಖ ನಗರಗಳಲ್ಲಿ ಸಾರ್ವಜನಿಕರು ಲಾಸ್ಟ್ ಮೈಲ್ ಕನೆಕ್ಟಿವಿಟಿಯನ್ನು ಒದಗಿಸಲು ಬೈಕ್ ಟ್ಯಾಕ್ಸಿ ಯೋಜನೆಯನ್ನು ಜಾರಿಗೊಳಿಸಿದೆ ಎಂದು ಹೇಳಿದ್ದು, ಈ ಸಂಬಂಧ ಸರ್ಕಾರ ಲಾಸ್ಟ್ ಮೈಲ್ ಕನೆಕ್ಟಿವಿಟಿಯನ್ನು ಒದಗಿಸಲು ಅಥವಾ ಬೈಕ್ ಟ್ಯಾಕ್ಸಿ ಯೋಜನೆಗೆ ಯಾವ ಕ್ರಮ ಜರುಗಿಸಿದೆ. | ಸಾರ್ವಜನಿಕ ಸಾರಿಗೆಗಾಗಿ ಮೊದಲ ಮತ್ತು ಕೊನೆಯ ಹಂತದ ಸಾರಿಗೆ ಸಂಪರ್ಕವನ್ನು ಕಲ್ಪಿಸುವ ಮತ್ತು ಸ್ವಯಂ-ಉದ್ಯೋಗ ಅವಕಾಶವನ್ನು ಒದಗಿಸುವ ಉದ್ದೇಶದಿಂದ, ಕರ್ನಾಟಕ ಸರ್ಕಾರವು ವಿದ್ಯುತ್ ಬೈಕ್ ಟ್ಯಾಕ್ಸಿ ಮತ್ತು ಅದಕ್ಕೆ ಸಂಬಂಧಿಸಿದ ವಿಷಯಗಳನ್ನು ನಿಯಂತ್ರಿಸುವುದಕ್ಕಾಗಿ ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ 2021 ಅನ್ನು ದಿನಾಂಕ: 14-07-2021 ರಿಂದ ಜಾರಿಗೆ ತರಲಾಗಿದೆ.<br><br>ಈ ಸಂಬಂಧ ಕರ್ನಾಟಕ ವಿದ್ಯುತ್ ಬೈಕ್ ಟ್ಯಾಕ್ಸಿ ಯೋಜನೆ 2021 ರಡಿಯಲ್ಲಿ ಲೈಸೆನ್ಸ್ ಬಯಸಿ ಅರ್ಜಿ ಸಲ್ಲಿಸುವ ಸಂಸ್ಥೆಗಳಿಗೆ ಇಲಾಖೆಯು ಲೈಸೆನ್ಸ್ ನೀಡುವ ಕ್ರಮ ಜಾರಿಯಲ್ಲಿರುತ್ತದೆ. |
| ಆ. | 2 Wheeler (ದ್ವಿಚಕ್ರ) ವಾಹನವನ್ನು White Board ವಾಹನವನ್ನು ಕಮರ್ಷಿಯಲ್ ಆಗಿ ಬಳಕೆ ಮಾಡಲು ಸರ್ಕಾರದ ನಿಲುವೇನು? | ಸಾರಿಗೇತರ ವರ್ಗದ (White Board) ದ್ವಿಚಕ್ರ ವಾಹನಗಳನ್ನು ಸಾರಿಗೆ ವಾಹನಗಳಾಗಿ (ಕಮರ್ಷಿಯಲ್) ಆಗಿ ಬಳಕೆ ಮಾಡಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ. |

ಟಿಡಿ 33 ಟಿಡಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ
ಪಂಗಡಗಳ ಕಲ್ಯಾಣ ಸಚಿವರು.